ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ 000083

Bangalore Development Authority

ಸಂಖ್ಯೆ: ಬೆಂಅಪ್ರಾ/ನಯೋಸ/DLP-20/2016-17/ 1420 /2018-19.
No. :

ದಿನಾಂಕ :
Date : 07/11/2018

## ಕಾರ್ಯಾದೇಶ

ವಿಷಯ:- ಬೆಂಗಳೂರು ಉತ್ತರ ತಾಲ್ಲೂಕು, ಯಲಹಂಕ ಹೋಬಳಿ, ಗಸ್ತಿಕೆಂಪನಹಳ್ಳಿ ಗ್ರಾಮದ ಸರ್ವೆ ನಂ. 03 ಮತ್ತು 9 ರಲ್ಲಿನ 01,06,937.29 ಚ.ಮೀ. [26 ಎಕರೆ 17 ಗುಂಟೆ] (0-19 ಗುಂಟೆ ಖರಾಬು ಹೊರತುಪಡಿಸಿ) ಪ್ರದೇಶದಲ್ಲಿ Affordable ವಸತಿ ಸಮುಚ್ಚಯ ಅಭಿವೃದ್ಧಿ ಯೋಜನಾ ನಕ್ಷೆಯನ್ನು ಶ್ರೀ.ಬಿ.ಎಂ.ಕರುಣೇಶ್, ನಿರ್ದೇಶಕರು, ಮೆ: ಆದರ್ಶ ಹೆವೆನ್ ಪ್ರೈ.ಲಿ ರವರ ಪರವಾಗಿ ಅನುಮೋದಿಸುವ ಬಗ್ಗೆ.

ಉಲ್ಲೇಖ

1. ಅರ್ಜಿದಾರರ ಮನವಿ ದಿನಾಂಕ 12.09.2016.
2. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ಠರಾವು ಸಂಖ್ಯೆ 106/2017, ದಿನಾಂಕ 09.11.2017.
3. ಈ ಕಛೇರಿಯ ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/DLP-20/2016-17/1773/2017-18, ದಿನಾಂಕ 05.01.2018.
4. ಕೆನರಾ ಬ್ಯಾಂಕ್ ಚಲನ್ ನಂ. 9993, ದಿನಾಂಕ 10.01.2018.
5. ಈ ಕಛೇರಿ ಅನೌಪಚಾರಿಕ ಟಿಪ್ಪಣಿ ಸಂಖ್ಯೆ ಬೆಂಅಪ್ರಾ/ನಯೋಸ/DLP-20/2016-17/ 1943/2017-18, ದಿನಾಂಕ 01.02.2018.
6. ಕಾರ್ಯಪಾಲಕ ಅಭಿಯಂತರರು [ಉತ್ತರ ವಿಭಾಗ], ಬೆಂಅಪ್ರಾ ಇವರು ದಿನಾಂಕ 20.04.2018 ರಂದು ನೋಂದಾಯಿತ ಪರಿತ್ಯಾಜನಾ ಪತ್ರದ ಮೂಲಕ ಉದ್ಯಾನವನ / ಬಯಲು ಜಾಗ ಮತ್ತು ರಸ್ತೆ ವಿಸ್ತರಣೆ ಪ್ರದೇಶಗಳನ್ನು ಪ್ರಾಧಿಕಾರಕ್ಕೆ ಹಸ್ತಾಂತರಿಸಿ ಕೊಂಡಿರುವುದು.
7. ಕಾವೇರಿ ನೀರಿನ ಕರ, ವರ್ತುಲ ರಸ್ತೆ ಮೇಲುಕರ, MRTS ಕರಗಳನ್ನು, ಮೆಟ್ರೋ ಕರ ಮತ್ತು ವಿವಿಧ ಶುಲ್ಕಗಳ ಪರಿಷ್ಕೃತ ದರವನ್ನು ಪಾವತಿಸುವ ಸಂಬಂಧ ಸರ್ಕಾರದ ಅಂತಿಮ ತೀರ್ಮಾನಕ್ಕೆ ಬದ್ಧರಿರುವುದಾಗಿ ಛಾಪಾ ಕಾಗದದಲ್ಲಿ ನೋಟರಿಯವರಿಂದ ದೃಢೀಕರಿಸಿ ದಿನಾಂಕ 02.05.2018 ರಂದು ನೀಡಿರುವ ಪ್ರಮಾಣ ಪತ್ರ.

ಬೆಂಗಳೂರು ಉತ್ತರ ತಾಲ್ಲೂಕು, ಯಲಹಂಕ ಹೋಬಳಿ, ಗಸ್ತಿಕೆಂಪನಹಳ್ಳಿ ಗ್ರಾಮದ ಸರ್ವೆ ನಂ. 03 ಮತ್ತು 9 ರಲ್ಲಿನ 01,06,937.29 ಚ.ಮೀ. [26 ಎಕರೆ 17 ಗುಂಟೆ] (0-19 ಗುಂಟೆ ಖರಾಬು ಹೊರತುಪಡಿಸಿ) ಪ್ರದೇಶದಲ್ಲಿ Affordable ವಸತಿ ಸಮುಚ್ಚಯ ಯೋಜನಾ ನಕ್ಷೆಯನ್ನು ಅನುಮೋದನೆ ನೀಡುವಂತೆ ಉಲ್ಲೇಖ [1] ರಲ್ಲಿ ಶ್ರೀ.ಬಿ.ಎಂ.ಕರುಣೇಶ್, ನಿರ್ದೇಶಕರು, ಮೆ: ಆದರ್ಶ ಹೆವೆನ್ ಪ್ರೈ.ಲಿ ರವರು ಕೋರಿದ್ದರು.

ಪ್ರಸ್ತಾವನೆಯನ್ನು ಪರಿಶೀಲಿಸಿ, ವಿಷಯವನ್ನು ಉಲ್ಲೇಖ [2] ರಲ್ಲಿನ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ವಿಷಯ ಸಂಖ್ಯೆ 106/2017, ದಿನಾಂಕ 09.11.2017 ರಲ್ಲಿ ಮಂಡಿಸಿ ಚರ್ಚಿಸಲಾಗಿರುತ್ತದೆ. ಚರ್ಚೆಯ ನಂತರ ಪ್ರಸ್ತಾವನೆಯು Affordable ವಸತಿ ಸಮುಚ್ಚಯ ಯೋಜನೆಯಾಗಿರುವುದರಿಂದ ಪ್ರತ್ಯೇಕವಾಗಿ EWS / LIG ಘಟಕಗಳನ್ನು ಕಾಯ್ದಿರಿಸುವ ಅವಶ್ಯಕತೆ ಇಲ್ಲವೆಂದು ತೀರ್ಮಾನಿಸಿ, ಬೆಂಗಳೂರು ಉತ್ತರ ತಾಲ್ಲೂಕು, ಯಲಹಂಕ ಹೋಬಳಿ, ಗಸ್ತಿಕೆಂಪನಹಳ್ಳಿ ಗ್ರಾಮದ ಸರ್ವೆ ನಂ. 03 ಮತ್ತು 9 ರಲ್ಲಿನ 01,06,937.29 ಚ.ಮೀ. [26 ಎಕರೆ 17 ಗುಂಟೆ] (0-19 ಗುಂಟೆ ಖರಾಬು ಹೊರತುಪಡಿಸಿ) ಪ್ರದೇಶಕ್ಕೆ Affordable ವಸತಿ ಸಮುಚ್ಚಯ ಯೋಜನಾ ನಕ್ಷೆ ಅನುಮೋದಿಸುವ ಅಧಿಕಾರವನ್ನು ಮಾನ್ಯ ಆಯುಕ್ತರಿಗೆ ಪ್ರತ್ಯಾಯೋಜಿಸಿ ಸಾಮಾನ್ಯ ಷರತ್ತುಗಳಿಗೊಳಪಡಿಸಿ ಅನುಮೋದಿಸಲು ತೀರ್ಮಾನಿಸಲಾಯಿತು.

ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ತೀರ್ಮಾನದಂತೆ ವಸತಿ ಅಭಿವೃದ್ಧಿ ಯೋಜನೆ ನಕ್ಷೆ ಅನುಮೋದನೆ ಸಂಬಂಧ ವಿವಿಧ ಶುಲ್ಕಗಳ ಬಾಬ್ತು ₹. 91,63,460/- [₹. ತೊಂಭತ್ತೊಂದು ಲಕ್ಷದ ಅರವತ್ತಮೂರು ಸಾವಿರದ ನಾಲ್ಕುನೂರ ಅರವತ್ತು ಮಾತ್ರ] ಗಳನ್ನು ಪ್ರಾಧಿಕಾರಕ್ಕೆ ಪಾವತಿಸುವಂತೆ ಉಲ್ಲೇಖ [3] ರ ಈ ಕಛೇರಿಯ ಪತ್ರದಲ್ಲಿ ತಿಳಿಸಲಾಗಿತ್ತು.

ಅರ್ಜಿದಾರರು ಉಲ್ಲೇಖ [4] ರಂತೆ ದಿನಾಂಕ 10.01.2018 ರಂದು ₹. 91,63,460/- [₹. ತೊಂಭತ್ತೊಂದು ಲಕ್ಷದ ಅರವತ್ತಮೂರು ಸಾವಿರದ ನಾಲ್ಕುನೂರ ಅರವತ್ತು ಮಾತ್ರ] ಗಳನ್ನು ಕೆನರಾ ಬ್ಯಾಂಕ್ ನ ಚಲನ್ ನಂ. 9993 ರ ಮೂಲಕ ಪಾವತಿಸಿರುತ್ತಾರೆ. ಸದರಿ ಮೊತ್ತವು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಸಂದಾಯವಾಗಿರುವ ಬಗ್ಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆರ್ಥಿಕ ವಿಭಾಗದವರು ದಿನಾಂಕ 05.04.2018 ರಂದು ದೃಢೀಕರಿಸಿರುತ್ತಾರೆ.

ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿನ ಉದ್ಯಾನವನ ಮತ್ತು ಬಯಲು ಜಾಗ ಹಾಗೂ ರಸ್ತೆ ವಿಸ್ತರಣೆ ಪ್ರದೇಶಗಳನ್ನು ನೊಂದಾಯಿತ ಪರಿತ್ಯಜನಾ ಪತ್ರದ ಮೂಲಕ ಪುಕ್ಕಟೆಯಾಗಿ ಪ್ರಾಧಿಕಾರಕ್ಕೆ ಹಸ್ತಾಂತರಿಸಿಕೊಳ್ಳುವಂತೆ ಉಲ್ಲೇಖ [5] ರ ಈ ಕಛೇರಿಯ ಅನೌಪಚಾರಿಕ ಟಿಪ್ಪಣಿಯಲ್ಲಿ ಪ್ರಾಧಿಕಾರದ ಕಾರ್ಯಪಾಲಕ ಅಭಿಯಂತರರು [ಉತ್ತರ] ರವರಿಗೆ ತಿಳಿಸಲಾಗಿತ್ತು. ದಿನಾಂಕ 20.04.2018 ರಂದು ಸದರಿ Affordable ವಸತಿ ಸಮುಚ್ಚಯ ನಕ್ಷೆಯಲ್ಲಿನ ಉದ್ಯಾನವನ ಮತ್ತು ಬಯಲು ಜಾಗ ಹಾಗೂ ರಸ್ತೆ ವಿಸ್ತರಣಾ ಪ್ರದೇಶಗಳನ್ನು ಪುಕ್ಕಟೆಯಾಗಿ ಉಲ್ಲೇಖ [6] ರಲ್ಲಿನ ನೊಂದಾಯಿತ ಪರಿತ್ಯಾಜನಾ ಪತ್ರದ ಮೂಲಕ ಪ್ರಾಧಿಕಾರಕ್ಕೆ ಹಸ್ತಾಂತರ ಮಾಡಿಕೊಂಡಿರುವುದಾಗಿ ಪ್ರಾಧಿಕಾರದ ಕಾರ್ಯಪಾಲಕ ಅಭಿಯಂತರರು [ಉತ್ತರ] ರವರು ವರದಿ ನೀಡಿರುತ್ತಾರೆ.

ಕಾವೇರಿ ನೀರಿನ ಕರ, ವರ್ತುಲ ರಸ್ತೆ ಮೇಲುಕರ ಎಂ.ಆರ್.ಟಿ.ಎಸ್ ಕರ, ಮೆಟ್ರೋಕರ ಮತ್ತು ವಿವಿಧ ಶುಲ್ಕಗಳ ಪರಿಷ್ಕೃತ ದರವನ್ನು ಪಾವತಿಸುವ ಸಂಬಂಧ ಸರ್ಕಾರದ ಅಂತಿಮ ತೀರ್ಮಾನಕ್ಕೆ ಬದ್ಧರಿರುವುದಾಗಿ ಉಲ್ಲೇಖ [7] ರಂತೆ ನೋಟರೈಸ್ಡ್ ಪ್ರಮಾಣ ಪತ್ರವನ್ನು ದಿನಾಂಕ 02.05.2018 ರಂದು ಸಲ್ಲಿಸಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನಲೆಯಲ್ಲಿ ಬೆಂಗಳೂರು ಉತ್ತರ ತಾಲ್ಲೂಕು, ಯಲಹಂಕ ಹೋಬಳಿ, ಗಸ್ತಿಕೆಂಪನಹಳ್ಳಿ ಗ್ರಾಮದ ಸರ್ವೆ ನಂ. 03 ಮತ್ತು 9 ರಲ್ಲಿನ 01,06,937.29 ಚ.ಮೀ. [26 ಎಕರೆ 17 ಗುಂಟೆ] (0-19 ಗುಂಟೆ ಖರಾಬು ಹೊರತುಪಡಿಸಿ) ಪ್ರದೇಶಕ್ಕೆ Affordable ವಸತಿ ಸಮುಚ್ಚಯ ಯೋಜನಾ ನಕ್ಷೆಯನ್ನು ಈ ಕೆಳಕಂಡ ಸಾಮಾನ್ಯ ಷರತ್ತುಗಳಿಗೊಳಪಡಿಸಿ ಅನುಮೋದಿಸಲಾಗಿದೆ.

| | |
|---|---|
| 1 | ಕುಡಿಯುವ ನೀರು ಹಾಗೂ ತ್ಯಾಜ್ಯ ನೀರು ವಿಲೇವಾರಿಗಾಗಿ ಮತ್ತು Sewage treatment plant ಸಹಿತ ಒಳಚರಂಡಿ ವ್ಯವಸ್ಥೆಯನ್ನು ಅರ್ಜಿದಾರರೇ ಕಲ್ಪಿಸುವುದು. ಕುಡಿಯುವ ನೀರು ಸರಬರಾಜು ಕುರಿತು ವಿವರವಾದ ವರದಿಯನ್ನು ಸಲ್ಲಿಸುವುದು. ಕುಡಿಯುವ ನೀರು ಮತ್ತು ಇತರೆ ಉಪಯೋಗಗಳಿಗೆ Dual Piping System ಅಳವಡಿಸಕ್ಕದ್ದು. |
| 2 | ಅಭಿವೃದ್ಧಿ ಯೋಜನೆಯಲ್ಲಿ ಕಡ್ಡಾಯವಾಗಿ ಮಳೆನೀರು ಕೊಯ್ಲಿಗೆ ಸಂಬಂಧಿಸಿದಂತೆ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ಉದ್ದೇಶಿತ ಒಟ್ಟು ಕ್ಷೇತ್ರದಲ್ಲಿ ಯಾವುದೇ ರೀತಿಯ ಮಳೆನೀರು ವ್ಯರ್ಥವಾಗಿ ಹೊರಗೆ ಹೋಗದಂತೆ ಉದ್ದೇಶಿತ ಜಮೀನಿನಲ್ಲಿಯೇ ಭೂಮಿಯ ಒಳಗಡೆ ಇಂಗುವಂತೆ ಮಾಡಲು ವಿನ್ಯಾಸವನ್ನು ಸಿದ್ಧಪಡಿಸಿ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ತೋರಿಸತಕ್ಕದ್ದು. |
| 3 | ವಿವರವಾದ ಕಟ್ಟಡ ನಕ್ಷೆಗಳನ್ನು ಸಕ್ಷಮ ಪ್ರಾಧಿಕಾರದಿಂದ ಅನುಮೋದಿಸಿಕೊಳ್ಳುವುದು. ಸಿವಿಲ್ ಮತ್ತು ಕಟ್ಟಡ ಕಾಮಗಾರಿಗೆ ಸಂಸ್ಕರಿಸಿದ ತ್ಯಾಜ್ಯ ನೀರನ್ನು BWSSB ಯವರಿಂದ ಪಡೆದು ಉಪಯೋಗಿಸುವುದು. |
| 4 | ಪ್ರಾಧಿಕಾರವು ಅನುಮೋದಿಸಿರುವ ಅಭಿವೃದ್ಧಿ ಯೋಜನಾ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಗಳನ್ನು ಕಾರ್ಯಗತ ಮಾಡುವುದು. ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆ ಮಾಡುವಂತಿಲ್ಲ. |
| 5 | ಜಾಗದ ಒಳಗೆ ಹೋಗಲು ಮತ್ತು ಹೊರಗೆ ಬರಲು ಸಂಚಾರ ವ್ಯವಸ್ಥೆಯಲ್ಲಿ ಅಡಚಣೆ ಉಂಟಾಗದಂತೆ ವ್ಯವಸ್ಥೆ ಕಲ್ಪಿಸುವುದು. ವಾಹನ ತಪಾಸಣೆಗೆ ಮತ್ತು ಭದ್ರತಾ ವ್ಯವಸ್ತೆಯನ್ನು ಅಳವಡಿಸಿದಲ್ಲಿ ಸ್ವತ್ತಿನ ಒಳಭಾಗದಲ್ಲಿ ನಿರ್ವಹಿಸುವುದು. |
| 6 | ವಿವರವಾದ ಕಟ್ಟಡ ನಕ್ಷೆಗಳನ್ನು ಅನುಮೋದಿಸುವ ಸಕ್ಷಮ ಪ್ರಾಧಿಕಾರವು Structural Stability ಬಗ್ಗೆ ಹಾಗೂ ವಿವಿಧ ಇಲಾಖೆಗಳು ನೀಡುವ NOC ಗಳಲ್ಲಿನ ಷರತ್ತುಗಳೊಂದಿಗೆ ಪರಿಶೀಲಿಸಿಕೊಳ್ಳತಕ್ಕದ್ದು. |
| 7 | ಅಭಿವೃದ್ಧಿ ಯೋಜನೆಯಲ್ಲಿ ಸೋಲಾರ್ ಲೈಟಿಂಗ್ ಮತ್ತು ಸೋಲಾರ್ ವಾಟರ್ ಹೀಟಿಂಗ್ ವ್ಯವಸ್ಥೆಯನ್ನು ಅಳವಡಿಸತಕ್ಕದ್ದು. |
| 8 | ಅಭಿವೃದ್ಧಿ ನಕ್ಷೆಯಲ್ಲಿ Sewage Treatment Plant, RWH, SWM ಗಳಿಗಾಗಿ ಸೂಕ್ತ ಜಾಗವನ್ನು ಕಾಯ್ದಿರಿಸುವುದು ಹಾಗೂ Transformer yard ಗೆ KPTCL ನಿಯಮಾವಳಿಯಂತೆ ಅಗತ್ಯ ಜಾಗವನ್ನು ಕಾಯ್ದಿರಿಸತಕ್ಕದ್ದು. |

| | |
|---|---|
| 9 | ಕಟ್ಟಡ ಕಾಮಗಾರಿ ಪ್ರಾರಂಭವಾದ ನಂತರ ಕಟ್ಟಡ ಸುರಕ್ಷತೆಯ ಬಗ್ಗೆ ಸಂಬಂಧಿಸಿದ ಸಕ್ಷಮ ಪ್ರಾಧಿಕಾರವು ಪರಿಶೀಲಿಸಿಕೊಳ್ಳತಕ್ಕದ್ದು. |
| 10 | ಅರ್ಜಿದಾರರು ಉದ್ದೇಶಿಸಿರುವ ಜಮೀನಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಥವಾ ಅನ್ಯ ಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಅಂತಹ ಸಂದರ್ಭದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಅನುಮೋದಿತ ಅಭಿವೃದ್ಧಿ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ. |
| 11 | ದಿನಾಂಕ:16/1/2010 ರಂದು ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ ನಗರಾಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯ ನಡವಳಿಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಹಾಗೂ ದಿನಾಂಕ: 07/01/2011 ರಂದು ಜರುಗಿದ ಸಮಿತಿ ಸಭೆಯ ವಿಷಯ ಸಂಖ್ಯೆ:09/2011ರ ತೀರ್ಮಾನದಂತೆ ಅಭಿವೃದ್ಧಿನಕ್ಷೆಯಲ್ಲಿ Arrangement of Blocks ಗಳನ್ನು ವಲಯನಿಯಮಾವಳಿಗಳಂತೆ ಪರಿಶೀಲಿಸಲಾಗಿದ್ದು, ಕಟ್ಟಡ ನಕ್ಷೆಗೆ ಸಂಬಂಧಿಸಿದ ಇತರೆ ವಿವರಗಳನ್ನು ಪರಿಶೀಲಿಸಿರುವುದಿಲ್ಲ. ಕಟ್ಟಡನಕ್ಷೆ ಅನುಮೋದಿಸುವ ಸಕ್ಷಮ ಪ್ರಾಧಿಕಾರವು ವಿವಿಧ ಇಲಾಖೆಗಳಿಂದ NOC ಗಳನ್ನು ಮತ್ತು ಇನ್ನಿತರೇ ಮಾಹಿತಿ / ದಾಖಲೆಗಳನ್ನು ಅರ್ಜಿದಾರರಿಂದ ಪಡೆದು ನಿಯಮಾನುಸಾರ ಪರಿಶೀಲಿಸಿಕೊಳ್ಳತಕ್ಕದ್ದು. |
| 12 | ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ಸಂಬಂಧ ಜಮೀನಿನ ಮಾಲೀಕತ್ವದ ಬಗ್ಗೆ ಅರ್ಜಿದಾರರು ತಪ್ಪು ಮಾಹಿತಿ ನೀಡಿದ್ದಲ್ಲಿ ಅಥವಾ ನ್ಯಾಯಾಲಯದಲ್ಲಿ ತಕರಾರು ಉದ್ಭವವಾದಲ್ಲಿ ಅಭಿವೃದ್ಧಿ ಯೋಜನಾ ನಕ್ಷೆಯ ಅನುಮೋದನೆಯು ತನ್ನಿಂತಾನೇ ರದ್ದಾಗುತ್ತದೆ. |
| 13 | ಅರ್ಜಿದಾರರು ಕಾವೇರಿ ನೀರಿನ ಕರ, ವರ್ತುಲ ರಸ್ತೆ ಮೇಲುಕರ, ಮೆಟ್ರೋ ಕರ ಹಾಗೂ ಎಂ.ಆರ್.ಟಿ.ಎಸ್. ಕರ ಹಾಗೂ ಈಗಾಗಲೇ ಪಾವತಿಸಿರುವ ವಿವಿಧ ಶುಲ್ಕಗಳ ಪರಿಷ್ಕೃತ ದರವನ್ನು ಪಾವತಿಸುವ ಸಂಬಂಧ ಸರ್ಕಾರದ ಅಂತಿಮ ಆದೇಶಕ್ಕೆ ಬದ್ಧರಿರುವುದಾಗಿ ದಿನಾಂಕ 02.05.2018 ರಂದು ಸಲ್ಲಿಸಿರುವ ನೋಟರೈಸ್ಡ್ ಪ್ರಮಾಣ ಪತ್ರಕ್ಕೆ ಬದ್ಧರಿರತಕ್ಕದ್ದು. |
| 14 | ಉದ್ಯಾನವನ ಮತ್ತು ಬಯಲು ಜಾಗಗಳನ್ನು ಹಾಗೂ ಸಿ.ಎ. ಜಾಗಗಳನ್ನು ಅನುಮೋದಿತ ನಕ್ಷೆ ಪ್ರಕಾರ ಅಭಿವೃದ್ಧಿಪಡಿಸುವುದು. |
| 15 | ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸುವ ಪ್ರದೇಶದಲ್ಲಿ ವಿವಿಧ ಜಾತಿಯ ಮರಗಿಡಗಳನ್ನು ಬೆಳೆಸಿ ಅಭಿವೃದ್ಧಿಪಡಿಸುವುದು. |
| 16 | ಅಭಿವೃದ್ಧಿ ಯೋಜನೆಯಲ್ಲಿ ಘನತ್ಯಾಜ್ಯಗಳನ್ನು, ಹಸಿ ತ್ಯಾಜ್ಯ, ಒಣತ್ಯಾಜ್ಯ, ಪ್ಲಾಸ್ಟಿಕ್ ಮತ್ತು ಇತ್ಯಾದಿಯಾಗಿ ವಿಂಗಡಿಸಿ, Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು. |
| 17 | ಪ್ರಸ್ತಾಪಿತ ಜಮೀನನ್ನು ಅಭಿವೃದ್ಧಿಪಡಿಸುವ ಸಂದರ್ಭದಲ್ಲಿ BESCOM ನಿರ್ದೇಶನದಂತೆ ಎಲೆಕ್ಟ್ರಿಕ್ ಕೇಬಲ್ ಗಳನ್ನು ಅಳವಡಿಸತಕ್ಕದ್ದು. |

000081



| | |
|---|---|
| 18 | ಅಭಿವೃದ್ಧಿ ಯೋಜನೆಯಲ್ಲಿ ಪ್ರಸ್ತಾಪಿಸಿರುವ ಎಲ್ಲಾ ರಸ್ತೆಗಳನ್ನು IRC Specification ಪ್ರಕಾರ ಅಭಿವೃದ್ಧಿ ಪಡಿಸತಕ್ಕದ್ದು. ಅದಕ್ಕೂ ಮುಂಚೆ ಅಂದಾಜು ಪಟ್ಟಿಯನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಭಿಯಂತರ ವಿಭಾಗದಿಂದ ಅನುಮೋದಿಸಿಕೊಳ್ಳತಕ್ಕದ್ದು. ರಸ್ತೆ ಅಭಿವೃದ್ಧಿ ಪಡಿಸುವ ಸಮಯದಲ್ಲಿ ಅಭಿಯಂತರ ವಿಭಾಗದಿಂದ ಸ್ಥಳ ಪರಿಶೀಲನೆ ಮತ್ತು ಕಾಮಗಾರಿ ಪರಿಶೀಲನೆಗೆ ಅನುವು ಮಾಡಿಕೊಡತಕ್ಕದ್ದು. |
| 19 | ಪ್ರಶ್ನಿತ ಪ್ರದೇಶದಲ್ಲಿ ಹಾದು ಹೋಗುವ ಹಳ್ಳ ಕೊಳ್ಳಗಳ ನೀರಿನ ಹರಿವಿಗೆ ಅಡಚಣೆ ಉಂಟು ಮಾಡದೆ ಸರಾಗವಾಗಿ ಹರಿದು ಹೋಗುವಂತೆ ಅಭಿವೃದ್ಧಿ ಪಡಿಸುವುದು. |
| 20 | ಕಟ್ಟಡ ನಕ್ಷೆ ಅನುಮೋದಿಸುವ ಮೋದಲು ಸಕ್ಷಮ ಪ್ರಾಧಿಕಾರಕ್ಕೆ TDR ವಿಸ್ತೀರ್ಣಕ್ಕೆ ಸಮಾನಾಂತರವಾದ DRC ಪ್ರಮಾಣ ಪತ್ರಗಳನ್ನು ಸಲ್ಲಿಸುವುದು. |
| 21 | ಪ್ರಾಧಿಕಾರವು ವಿಧಿಸುವ ಇತರೆ ಷರತ್ತುಗಳಿಗೆ ಬದ್ದರಾಗಿರುವುದು. |

ಆಯುಕ್ತರು,

ಬೆಂಅಪ್ರಾ, ಬೆಂಗಳೂರು.

ಇವರಿಗೆ

ಶ್ರೀ ಬಿ.ಎಂ. ಕರುಣೇಶ್ ,

ನಿರ್ದೇಶಕರು,

ಮೆಃ ಆದರ್ಶ ಹೆವೆನ್ ಪ್ರೈ. ಲಿ.,

# 10, ವಿಠಲ್ ಮಲ್ಯ ರಸ್ತೆ,

ಬೆಂಗಳೂರು 560 001.